Vijayavani Dt. 24/04/2019. P.no. 5.
(World Book Day Prog.)



ವಿಶ್ವ ಪುಸ್ತಕ ದಿನ ಹಾಗೂ ಕೃತಿಸ್ವಾಮ್ಯ ದಿನಾಚರಣೆಯಲ್ಲಿ ಪ್ರಕಾಶಕರಾದ ರಾಜ್‌ಕುಮಾರ್ ಮತ್ತು ಶಾಂಭವಿ ಪ್ರಭು ಅವರನ್ನು ಸನ್ಮಾನಿಸಲಾಯಿತು. ಡಾ. ಚಂದ್ರಶೇಖರ ಕಂಬಾರ, ಸಿದ್ದಲಿಂಗಯ್ಯ ಮತ್ತಿತರರಿದ್ದರು.

Prajavani Dt. 24/04/2019. P.No. 2.
(World Book Day. Prog)




ಕವಿ ಸಿದ್ಧಲಿಂಗಯ್ಯ ಅವರು ಮಾತನಾಡಿದರು (ಎಡದಿಂದ) ಕರ್ನಾಟಕ ಪ್ರಕಾಶಕರ ಸಂಘದ ಅಧ್ಯಕ್ಷ ಪ್ರಕಾಶ್ ಕಂಬತ್ತಳ್ಳಿ, ಕೆ.ರಾಜಕುಮಾರ್, ಸಾಹಿತ್ಯ ಅಕಾಡೆಮಿ ಪ್ರಾದೇಶಿಕ ಕಾರ್ಯದರ್ಶಿ ಎಸ್.ಪಿ.ಮಹಾಲಿಂಗೇಶ್ವರ, ಶಾಂಭವಿ ಪ್ರಭು, ಚಂದ್ರಶೇಖರ ಕಂಬಾರ ಪಾಲ್ಗೊಂಡಿದ್ದರು—ಪ್ರಜಾವಾಣಿ ಚಿತ್ರ

# ರಾಜಕಾರಣಿಗಳು ಪುಸ್ತಕ ಪ್ರೀತಿ ಬೆಳೆಸಿಕೊಳ್ಳಲಿ: ಕವಿ ಸಿದ್ಧಲಿಂಗಯ್ಯ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ರಾಜಕಾರಣಿಗಳು ಓದಿನಿಂದ ವಿಮುಖರಾಗುತ್ತಿದ್ದಾರೆ. ಅವರು ಓದುವ ಸಂಸ್ಕೃತಿಯನ್ನು ಬೆಳೆಸಿಕೊಂಡರೆ ಅದರ ಮೂಲಕ ಸಮಾಜದ ಸಮಸ್ಯೆಗಳನ್ನು ಅರಿತುಕೊಳ್ಳಬಹುದು' ಎಂದು ಕವಿ ಸಿದ್ಧಲಿಂಗಯ್ಯ ಅಭಿಪ್ರಾಯಪಟ್ಟರು.

ಕೇಂದ್ರಸಾಹಿತ್ಯಅಕಾಡೆಮಿಯು ಕರ್ನಾಟಕಪ್ರಕಾಶಕರ ಸಂಘದ ಸಹಯೋಗದೊಂದಿಗೆ ಆಯೋಜಿಸಿದ್ದ 'ವಿಶ್ವ ಪುಸ್ತಕ ಮತ್ತು ಕೃತಿಸ್ವಾಮ್ಯ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಕನ್ನಡ ಪುಸ್ತಕೋದ್ಯಮ ಸಂಕಷ್ಟದಲ್ಲಿದೆ. ಆದರೂ ಪ್ರಕಾಶಕರು ಪುಸ್ತಕಗಳನ್ನು ಪ್ರಕಟಿಸುತ್ತಿದ್ದಾರೆ. ಸರ್ಕಾರ ಪುಸ್ತಕೋದ್ಯಮಕ್ಕೆ ಉತ್ತೇಜನ ನೀಡಬೇಕು. ಬಾಕಿ ಉಳಿಸಿಕೊಂಡಿರುವ ಗ್ರಂಥಾಲಯ ಸೆಸ್ ಅನ್ನು ಸಂಬಂಧಿಸಿದ ಇಲಾಖೆಗೆ ಬಿಡುಗಡೆ ಮಾಡಬೇಕು ಎಂದು ಸಾಹಿತಿಗಳು ಸರ್ಕಾರದ ಮೇಲೆ ಒತ್ತಡ ತರಬೇಕಾದ ಅಗತ್ಯವಿದೆ' ಎಂದು ಹೇಳಿದರು.

'ಜಿ.ಪಿ.ರಾಜರತ್ನಂ ಹಾಗೂ ಗಳಗನಾಥರು ಪುಸ್ತಕಗಳನ್ನು ತಲೆ ಮೇಲೆ ಹೊತ್ತು ಮಾರಿದರು. ಹಲವು ಸಾಹಿತಿಗಳೂ ತಾವೇ ಪುಸ್ತಕದಂಗಡಿ ತೆರೆದು ಸಾಹಿತ್ಯ ಪರಿಚಾರಿಕೆಯಲ್ಲಿ ತೊಡಗಿದರು. ಅಂಥ ಹಿರಿಯ ಸಾಹಿತಿಗಳನ್ನು ಪುಸ್ತಕ ದಿನವಾದ ಇಂದು ನೆನಪಿಸಿಕೊಳ್ಳಬೇಕು' ಎಂದರು.

ಕೇಂದ್ರ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಚಂದ್ರಶೇಖರ ಕಂಬಾರ ಮಾತನಾಡಿ, 'ಕನ್ನಡ ಉಳಿಸಲು ಶ್ರಮಿಸುತ್ತಿರುವ ಶಿಕ್ಷಕರನ್ನು ಕರೆದು ಗೌರವಿಸುವ ಕೆಲಸವಾಗಬೇಕು. ಅವರನ್ನು ಪ್ರೋತ್ಸಾಹಿಸಿದಂತೆ ಆಗುತ್ತದೆ. ಅವರು ಇನ್ನೂ ಹೆಚ್ಚು ಕೆಲಸ ಮಾಡುತ್ತಾರೆ' ಎಂದರು. ಸಿರಿಗನ್ನಡ ಪ್ರಕಾಶನದ ಕೆ.ರಾಜಕುಮಾರ್ ಹಾಗೂ ಉಡುಪಿಯ ಸೀತಾ ಪುಸ್ತಕ ಮಳಿಗೆಯ ಶಾಂಭವಿ ಪ್ರಭು ಅವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

> ಪುಸ್ತಕವೆಂದರೆ ಸಂಸ್ಕೃತಿ, ಅರಿವಿನ ಪರದೆಯನ್ನು ವಿಸ್ತರಿಸುವ ಸಾಧನ ಮತ್ತು ನೆಲದ ಮರೆಯ ನಿಧಾನ. ಅಂಥ ಪುಸ್ತಕ ದಿನದಂದು ನನ್ನನ್ನು ಗೌರವಿಸಿರುವುದು ಸಂತಸ ತಂದಿದೆ
> **ಕೆ.ರಾಜಕುಮಾರ್**, ಪ್ರಕಾಶಕ

> ಕನ್ನಡ ಶಿಕ್ಷಕರು ನನ್ನಲ್ಲಿ ಪುಸ್ತಕ ಪ್ರೀತಿಯನ್ನು ಬೆಳೆಸಿದರು. ಬೆಂಗಳೂರಿನ ಹಲವು ಪ್ರಕಾಶಕರು ಸಾಲದ ರೂಪದಲ್ಲಿ ಪುಸ್ತಕಗಳನ್ನು ನೀಡಿ, ಪುಸ್ತಕ ಪರಿಚಾರಿಕೆಯನ್ನಾಗಿ ಮಾಡಿದರು
> **ಶಾಂಭವಿ ಪ್ರಭು**, ಪ್ರಕಾಶಕಿ, ಉಡುಪಿ

Prajavani 24/4/2019. P.No-2

Udayavani . Dt. 24/04/2019 P. no 4.
(World Book Day Prog.)

# ಓದುಗರನ್ನು ಹೆಚ್ಚಿಸಲು ಆಂದೋಲನ ಅಗತ್ಯ

## ವಿಶ್ವ ಪುಸ್ತಕ ದಿನಾಚರಣೆಯಲ್ಲಿ ಸಾಹಿತಿ ಡಾ.ಸಿದ್ಧಲಿಂಗಯ್ಯ ಅಭಿಮತ

**ಬೆಂಗಳೂರು:** ಪುಸ್ತಕ ಓದುವವರ ಸಂಖ್ಯೆ ಕಡಿಮೆಯಾಗುತ್ತಿದ್ದು ಮತ್ತೊಂದೆಡೆ ಪುಸ್ತಕ ಬರೆಯುವವರ ಸಂಖ್ಯೆ ಮಾತ್ರ ಹೆಚ್ಚುತ್ತಲೇ ಇದೆ. ಹೀಗಾಗಿ ಕನ್ನಡ ಪುಸ್ತಕ ಓದುಗರ ಸಂಖ್ಯೆ ಹೆಚ್ಚಳಕ್ಕಾಗಿ ಆಂದೋಲನ ನಡೆಸಬೇಕಿದೆ ಎಂದು ಸಾಹಿತಿ ಡಾ. ಸಿದ್ಧಲಿಂಗಯ್ಯ ಅಭಿಪ್ರಾಯಪಟ್ಟರು.

ಕರ್ನಾಟಕ ಪ್ರಕಾಶಕರ ಸಂಘ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಮಂಗಳವಾರ ನಗರದ ಕೇಂದ್ರ ಸಾಹಿತ್ಯ ಅಕಾಡೆಮಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಪುಸ್ತಕ ದಿನಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪುಸ್ತಕ ಓದುಗರ ಹೆಚ್ಚಿದ್ದರೂ, ಕನ್ನಡ ಓದುಗರ ಸಂಖ್ಯೆ ಕಡಿಮೆಯಿದೆ. ಹೀಗಾಗಿ ಆಂದೋಲನ ನಡೆಸಬೇಕಿದ್ದು ರಾಜಕಾರಣಿಗಳು ಸಾಹಿತ್ಯ ಓದುವುದರಿಂದ ಜನರ ಸಮಸ್ಯೆ, ಅಭಿವೃದ್ಧಿಗೆ ಸರಿಯಾದ ನಿರ್ಧಾರ ಕೈಗೊಳ್ಳಬಹುದಾಗಿದೆ ಎಂದರು.

ಸರ್ಕಾರ ಬಾಕಿ ಉಳಿಸಿಕೊಂಡಿರುವ 400 ಕೋಟಿ ರೂ. ಗ್ರಂಥಾಲಯ ಸೆಸ್ ಕೂಡಲೇ ಪಾವತಿಸುವ ಮೂಲಕ ಗ್ರಂಥಾಲಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಓದುಗರ ಸಂಖ್ಯೆ ಹೆಚ್ಚಳಕ್ಕೆ ಗ್ರಂಥಾಲಯಗಳು ಸಹಕಾರಿಯಾಗಿದ್ದು ಈ ನಿಟ್ಟಿನಲ್ಲಿ ಗ್ರಂಥಾಲಯಗಳಿಗೆ ಹೊಸ ಪುಸ್ತಕ ಮತ್ತು ಗ್ರಂಥಾಲಯಗಳ ಅವಶ್ಯವಿದೆ. ಗ್ರಂಥಾಲಯಗಳ ಅಭಿವೃದ್ಧಿ ದೃಷ್ಟಿಯಿಂದ ಸರ್ಕಾರ ಬಾಕಿ ಉಳಿಸಿಕೊಂಡಿರುವ ಬಾಕಿ ಹಣ ಪಾವತಿಸಬೇಕು ಎಂದು ಆಗ್ರಹಿಸಿದರು.



'ವಿಶ್ವ ಪುಸ್ತಕ ದಿನಾಚರಣೆ' ಕಾರ್ಯಕ್ರಮದಲ್ಲಿ ಸಾಹಿತಿ ಡಾ.ಸಿದ್ಧಲಿಂಗಯ್ಯ, ಸಾಹಿತಿ ಡಾ.ಚಂದ್ರಶೇಖರ ಕಂಬಾರ, ನಾಗೇಶ್ ಹೆಗಡೆ ಇರತರಿದ್ದರು.

ಕೇಂದ್ರ ಸಾಹಿತ್ಯ ಅಕಾಡೆಮಿಯ ದಕ್ಷಿಣ ಪ್ರಾದೇಶಿಕ ಕೇಂದ್ರ ಕಟ್ಟಡ ನಿರ್ಮಾಣಕ್ಕಾಗಿ ಜ್ಞಾನಭಾರತಿ ವ್ಯಾಪ್ತಿಯಲ್ಲಿ 1 ಎಕರೆ ಭೂಮಿ ಮಂಜೂರಾಗಿದೆ. ಕಟ್ಟಡ ನಿರ್ಮಾಣಕ್ಕೆ 20 ಕೋಟಿ ರೂ. ಅನುದಾನ ಲಭ್ಯವಾಗಿದ್ದು ದಕ್ಷಿಣ ಭಾಗದ 6 ರಾಜ್ಯಗಳ ಸಾಹಿತ್ಯ ಚಟುವಟಿಕೆಗಳಿಗೆ ಪ್ರಾದೇಶಿಕ ಕೇಂದ್ರ ವೇದಿಕೆಯಾಗಲಿದೆ. ಆದರಂತೆ ಶೀಘ್ರದಲ್ಲಿಯೇ ಪ್ರಾದೇಶಿಕ ಕಚೇರಿ ಆರಂಭವಾಗಲಿದೆ ಎಂದರು.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ.ಚಂದ್ರಶೇಖರ ಕಂಬಾರ ಮಾತನಾಡಿ, ತಂತ್ರಜ್ಞಾನ ಬೆಳವಣಿಗೆಯಿಂದ ಬರವಣಿಗೆ ನಶಿಸುತ್ತಿದೆ. ಪ್ರಸ್ತುತ ಓದುಗರು ಮೊಬೈಲ್ ಮೂಲಕವೇ ಪುಸ್ತಕ ಓದುತ್ತಿದ್ದು ಪುಸ್ತಕ ಕೊಂಡು ಓದುವವರ ಸಂಖ್ಯೆ ಕಡಿಮೆಯಾಗಿದೆ. ತಾಂತ್ರಿಕತೆಯೊಂದಿಗೆ ಜನ ಸಂಪರ್ಕ ಬೆಳೆಸಿಕೊಳ್ಳುವ ಅವಶ್ಯಕತೆಯಿದೆ ಎಂದು ಹೇಳಿದರು.

ಸಿರಿಗನ್ನಡ ಪ್ರಕಾಶನದ ಕೆ.ರಾಜಕುಮಾರ್, ಸೀತಾ ಬುಕ್ ಸೆಂಟರ್‌ನ ಶಾಂಭವಿ ಪ್ರಭುರನ್ನು ಕಾರ್ಯಕ್ರಮದಲ್ಲಿ ಗೌರವಿಸಲಾಯಿತು. ಸಾಹಿತ್ಯ ಅಕಾಡೆಮಿಯ ದಕ್ಷಿಣ ಪ್ರಾದೇಶಿಕ ಕೇಂದ್ರ ಕಾರ್ಯದರ್ಶಿ ಎಸ್.ಪಿ. ಮಹಾಲಿಂಗೇಶ್ವರ, ಕರ್ನಾಟಕ ಪ್ರಕಾಶಕರ ಸಂಘದ ಅಧ್ಯಕ್ಷ ಪ್ರಕಾಶ್ ಕಂಬತ್ತಳ್ಳಿ, ಪ್ರಧಾನ ಕಾರ್ಯದರ್ಶಿ ರವಿಕುಮಾರ್, ನವ ಕರ್ನಾಟಕ ಪ್ರಕಾಶನದ ರಮೇಶ್ ಉಡುಪ ಸೇರಿ ಪ್ರಮುಖರು ಹಾಜರಿದ್ದರು.